ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/09/ಎಸ್‌ಟಿಎಸ್/2024

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ತಾಂತ್ರಿಕ ಭವನ, ಅರಮನೆ ರಸ್ತೆ
ಬೆಂಗಳೂರು-560 001,
ದಿನಾಂಕ:12.11.2024

## ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಿಕೆ Directory – 2024 ತಯಾರಿಸುವ ಸಲುವಾಗಿ ಮಾಹಿತಿಯನ್ನು ಒದಗಿಸುವ ಬಗ್ಗೆ.

*******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಅಗತ್ಯ ಮೂಲ ಮಾಹಿತಿಗಳನ್ನೊಳಗೊಂಡ ಇಲಾಖೆಯ ನಿರ್ದೇಶಿಕೆ 2024ರ ಪ್ರಕಟಣೆಯನ್ನು ತಯಾರಿಸುವ ಕಾರ್ಯ ಪ್ರಾರಂಭಿಸಲಾಗಿರುತ್ತದೆ. ನಿರ್ದೇಶಿಕೆ 2024ರ ಪ್ರಕಟಣೆಯಲ್ಲಿ ಅಳವಡಿಸಬೇಕಾಗಿರುವ, ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರುಗಳು, ಸಹಾಯಕ ಆಡಳಿತಾಧಿಕಾರಿಗಳು, ಕುಲಸಚಿವರುಗಳು ಹಾಗೂ ಇತರೆ ಸಂಯೋಜಕರುಗಳ ಹೆಸರು, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ ಮತ್ತು ಕಛೇರಿ ವಿಳಾಸಗಳನ್ನೊಳಗೊಂಡ ಮಾಹಿತಿಗಳ ವಿವರಗಳನ್ನು ಈ ಕೆಳಕಂಡಂತೆ ಅನುಬಂಧಗಳಲ್ಲಿ ತಯಾರಿಸಿ ಲಗತ್ತಿಸಲಾಗಿದೆ,

ಅನುಬಂಧ 1 ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು,
ಅನುಬಂಧ 2 ರಲ್ಲಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು.
ಅನುಬಂಧ 3 ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು,
ಅನಬಂಧ 4 ರಲ್ಲಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳು ಮತ್ತು
ಅನುಬಂಧ 5 ರಲ್ಲಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು.

ಆದ್ದರಿಂದ ಮೇಲ್ಕಂಡಂತೆ ಅನುಬಂಧಗಳಲ್ಲಿ ಇರುವಂತೆ ಎಲ್ಲಾ ಸರ್ಕಾರಿ/ ಅನುದಾನಿತ ಇಂಜಿನಿಯರಿಂಗ್, ಪಾಲಿಟೆಕ್ನಿಕ್ ಮತ್ತು ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರುಗಳು, ಸಹಾಯಕ ಆಡಳಿತಾಧಿಕಾರಿಗಳು, ಕುಲಸಚಿವರುಗಳು ಹಾಗೂ ಇತರೆ ಸಂಯೋಜಕರುಗಳ ಹೆಸರು, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ ಮತ್ತು ಕಛೇರಿ ವಿಳಾಸಗಳನ್ನೊಳಗೊಂಡ ಸಮಗ್ರ ಮಾಹಿತಿಗಳನ್ನು ಇದರೊಂದಿಗೆ ಲಗತ್ತಿಸಲಾಗಿರುವ ಪ್ರತ್ಯೇಕ Google Spreadsheet ನಲ್ಲಿ ಕಾಲೇಜುವಾರು ಮಾಹಿತಿಗಳನ್ನು ಭರ್ತಿ ಮಾಡಿ ದಿನಾಂಕ: 16.11.2024 ರೊಳಗಾಗಿ ಕೇಂದ್ರ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

1. ಪ್ರಾಂಶುಪಾಲರು
2. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು
3. ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.
4. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ತಾಂ.ಶಿ.ಇ. ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು)